# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ, ಬೆಂಗಳೂರು ಇದಕ್ಕೆ ದಾವಾ ಪಂಚಾಯತಿ ನ್ಯಾಯಾಲಯ ಸ್ಥಾಪಿಸಲು ಅನುವಾಗುವಂತೆ ನಿಯಮ-441 ರಡಿ ಸಹಕಾರ ಸಂಘಗಳ ಜಂಟಿ ನಿಬಂಧಕರು ಮತ್ತು ಸಹಕಾರ ಸಂಘಗಳ ಸಹಾಯಕ ನಿಬಂಧಕರ ಹುದ್ದೆಗಳನ್ನು ಸೃಜಿಸುವ ಕುರಿತು

**ಸರ್ಕಾರದ ಆದೇಶ ಸಂಖ್ಯೆ: ಸಇ 402 ಎಸಸೇ 2015, ಬೆಂಗಳೂರು, ದಿನಾಂಕ: 04-12-2015**

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ: ಆಇ 01 ಟಿಎಫ್‌ಪಿ 1996, ದಿನಾಂಕ: 10-07-1996
2) ಸಹಕಾರ ಸಂಘಗಳ ನಿಬಂಧಕರು ಇವರ ಪತ್ರ ಸಂಖ್ಯೆ: ಆರ್‌ಎಸ್‌ಆರ್/ಸೌಹಾರ್ದ/ನ್ಯಾ.ರ/15/2015-16, ದಿನಾಂಕ: 27-06-2015 ಮತ್ತು 21-09-2015

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು, 1958ರ ನಿಯಮ-441 ರನ್ವಯ ಹುದ್ದೆಗಳನ್ನು ಸೃಜಿಸಲು ಇಲಾಖಾ ಕಾರ್ಯದರ್ಶಿಯವರಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ: (2) ರಲ್ಲಿ ಓದಲಾದ ಸಹಕಾರ ಸಂಘಗಳ ನಿಬಂಧಕರು ಇವರ ಪತ್ರದಲ್ಲಿ ರಾಜ್ಯದಲ್ಲಿ ಒಟ್ಟು 3,721 ವಿವಿಧ ಪ್ರಕಾರದ ಸೌಹಾರ್ದ ಸಹಕಾರಿಗಳು ನೋಂದಣಿಗೊಂಡು ಕಾರ್ಯನಿರ್ವಹಿಸುತ್ತಿವೆ. ಸೌಹಾರ್ದ ಸಹಕಾರಿಗಳ ವಿವಾದಗಳಿಗೆ ಸಂಬಂಧಿಸಿದಂತೆ ದಾವಾಗಳ ವಿಲೇವಾರಿ ವಿಳಂಬವಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿರುವ ಸಹಕಾರಿಗಳ ದಾವಾಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಲು ಒಂದು ಪ್ರತ್ಯೇಕ ನ್ಯಾಯಾಲಯವನ್ನು ಬೆಂಗಳೂರಿನಲ್ಲಿ ರಚಿಸುವುದು ಸೂಕ್ತವಾಗಿರುತ್ತದೆಂದು ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಸಂಬಂಧಿಸಿದ ದಾಖಲಾತಿಗಳೊಂದಿಗೆ ಪರಿಶೀಲಿಸಿದ ಸರ್ಕಾರವು ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ, ಬೆಂಗಳೂರು ಇದಕ್ಕೆ ದಾವಾ ಪಂಚಾಯತಿ ನ್ಯಾಯಾಲಯ ಸ್ಥಾಪಿಸಲು ಅನುವಾಗುವಂತೆ ನಿಯಮ-441 ರಡಿ ಸಹಕಾರ ಸಂಘಗಳ ಜಂಟಿ ನಿಬಂಧಕರು ಮತ್ತು ಸಹಕಾರ ಸಂಘಗಳ ಸಹಾಯಕ ನಿಬಂಧಕರ ಹುದ್ದೆಗಳನ್ನು ತಾತ್ಕಾಲಿಕವಾಗಿ ಎರಡು ವರ್ಷಗಳ ಅವಧಿಗೆ ಸೃಜಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

## ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು, 1958ರ ನಿಯಮ-441 ರನ್ವಯ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ, ಬೆಂಗಳೂರು ಇವರಿಗೆ ದಾವಾ ಪಂಚಾಯತಿ ನ್ಯಾಯಾಲಯ ಸ್ಥಾಪಿಸಲು ಅನುವಾಗುವಂತೆ ನಿಯಮ-441 ರಡಿ ಸಹಕಾರ ಸಂಘಗಳ ಜಂಟಿ ನಿಬಂಧಕರು ಮತ್ತು ಸಹಕಾರ ಸಂಘಗಳ ಸಹಾಯಕ ನಿಬಂಧಕರ ಹುದ್ದೆಗಳನ್ನು ತಾತ್ಕಾಲಿಕವಾಗಿ ಎರಡು ವರ್ಷಗಳ ಅವಧಿಗೆ ಸೃಜಿಸಲು ತೀರ್ಮಾನಿಸಿದೆ.

ಬೆಂಗಳೂರು
10 DEC 2015
ಸಂಖ್ಯೆ: 12983

2...

ಈ ಹುದ್ದೆಗೆ ತಗಲುವ ವೆಚ್ಚವನ್ನು ಪ್ರಾರಂಭದಲ್ಲಿ ಪ್ರಸಕ್ತ ಸಾಲಿನ ಆಯವ್ಯಯ ಅಂದಾಜಿನಲ್ಲಿ "2245-ಸಹಕಾರ-101-ನಿರ್ದೇಶನ ಮತ್ತು ಆಡಳಿತ-01-ಸಹಕಾರ ಸಂಘಗಳ ನಿಬಂಧಕರು-ವೇತನ-002-ಅಧಿಕಾರಿಗಳು-003-ಸಿಬ್ಬಂದಿ-011-ತುಟ್ಟಿಭತ್ಯೆ-014-ಇತರೆ ಭತ್ಯೆಗಳು (ಯೋಜನೇತರ)" ಲೆಕ್ಕಶೀರ್ಷಿಕೆಯಿಂದ ಭರಿಸತಕ್ಕದ್ದು.

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು, 1958ರ ನಿಯಮ-427 ರೊಂದಿಗೆ ಓದಿಕೊಂಡು ಅದೇ ನಿಯಮಗಳ ನಿಯಮ-441(ಎ) ಮತ್ತು (ಬಿ) ಪ್ರಕಾರ ಸದರಿ ವೆಚ್ಚವನ್ನು ಸಹಕಾರ ಸಂಘಗಳ ನಿಬಂಧಕರು ಸಕ್ರಮವಾಗಿ ಸಂಸ್ಥೆಯಿಂದ ವಸೂಲು ಮಾಡಿ ಸಂಬಂಧಿಸಿದ ಲೆಕ್ಕಶೀರ್ಷಿಕೆಗೆ ಸಂದಾಯಿಸತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಸಇ 121 ಆಂಆಸ 2015, ದಿನಾಂಕ: 16-11-2015 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ.ಬಿ ಪ್ರಕಾಶ್) 04.12.15
ಸರ್ಕಾರದ ಅಧೀನ ಕಾರ್ಯದರ್ಶಿ
ಸಹಕಾರ ಇಲಾಖೆ

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01
2) ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01
3) ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01
4) ಸಹಕಾರ ಸಂಘಗಳ ನಿಬಂಧಕರು, ನಂ.1, ಅಲಿ ಆಸ್ಕರ್ ರಸ್ತೆ, ಬೆಂಗಳೂರು
5) ಅಧ್ಯಕ್ಷರು / ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ, ನಿರ್ಮಾಣ ಭವನ, ಡಾ: ರಾಜ್‌ಕುಮಾರ್ ರಸ್ತೆ, 1ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು-560010

**ಪ್ರತಿ:**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಹಕಾರ ಇಲಾಖೆ
2) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಹಕಾರ ಇಲಾಖೆ
3) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು